<u>ಕರ್ನಾಟಕ ಸರ್ಕಾರ</u>

**ಸಮಾಜ ಕಲ್ಯಾಣ ಇಲಾಖೆ**

## ಜಿಲ್ಲಾಧಿಕಾರಿಗಳ ಕಾರ್ಯಾಲಯ ಬಾಗಲಕೋಟ ಜಿಲ್ಲೆ ಬಾಗಲಕೋಟ

ಸಂ:ಜಿಆಬಾ/ಸಕಇ/ಸಿಬ್ಬಂದಿ/ಸಿಆರ್-09/2016-17 ದಿನಾಂಕ: 20.10.2016

**-ಃ ಅಧಿಸೂಚನೆ ಃ-**

ಬಾಗಲಕೋಟ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ 25 ಅಡುಗೆ ಸಹಾಯಕರು ಹಾಗೂ 27 ಕಾವಲುಗಾರರ ವೃಂದದ ಹುದ್ದೆಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಸಕಇ 268 ಪಕಸೇ 2015 ದಿನಾಂಕ: 29.09.2016 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮಂಜೂರಾತಿ ನೀಡಲಾಗಿದ್ದು, ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ONLINE ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಹುದ್ದೆಗಳ ವರ್ಗೀಕರಣದ ಮೀಸಲಾತಿಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 08 ಸೇಇಮ 95 ದಿ: 20.06.1995, ಆದೇಶ ಸಂಖ್ಯೆ:ಸಿಆಸುಇ 97 ಸೇನೆನಿ 2002 ದಿ:22.11.2002 ಹಾಗೂ ಆದೇಶ ಸಂಖ್ಯೆ:ಸಿಆಸುಇ 53 ಸೇನೆನಿ 2007 ದಿ:04.01.2008 ರನ್ವಯ Vertical and horizontal ಮೀಸಲಾತಿಯಂತೆ ವರ್ಗೀಕರಿಸಲಾಗಿದೆ. ಹಾಗೂ ಮಹಿಳಾ ಮೀಸಲಾತಿ, ಅಂಗವಿಕಲ ಅಭ್ಯರ್ಥಿ ಕುರಿತಂತೆ ಸರ್ಕಾರ / ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆ ಇವರಿಂದ ಕಾಲಕಾಲಕ್ಕೆ ಹೊರಡಿಸಿದ ಆದೇಶದಂತೆ ವರ್ಗೀಕರಿಸಲಾಗಿದೆ. ಹುದ್ದೆಗಳ ವರ್ಗೀಕರಣದ ಸಂಪೂರ್ಣ ವಿವರಗಳನ್ನು **http://bagalkot.nic.in** ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

1. **ವಯೋಮಿತಿ ಃ-**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸತಕ್ಕದ್ದು.

ಆ) ಗರಿಷ್ಠ ವಯೋಮಿತಿ ವಿವರಗಳು ಈ ಕೆಳಕಂಡಂತಿರುತ್ತದೆ.

| ಕ್ರ. ಸಂ. | ಜಾತಿ / ಪ್ರವರ್ಗ | ಗರಿಷ್ಠ ವಯೋಮಿತಿ |
|---|---|---|
| 1 | ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷ |
| 2 | ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 38 ವರ್ಷ |
| 3 | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1ರ ಅಭ್ಯರ್ಥಿಗಳಿಗೆ | 40 ವರ್ಷ |

2. **ಅರ್ಜಿ ಶುಲ್ಕ ಃ-**

| ಕ್ರ. ಸಂ. | ಜಾತಿ / ಪ್ರವರ್ಗ | ಅಡುಗೆ ಸಹಾಯಕರು | ಕಾವಲು ಗಾರರು |
|---|---|---|---|
| 1 | **ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ -1 ಅಭ್ಯರ್ಥಿಗಳಿಗೆ** | ರೂ.100/- | ರೂ.100/- |
| 2 | **ಪ್ರವರ್ಗ-2ಎ, 2ಬಿ, 3ಎ, 3ಬಿ ಹಾಗೂ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ.** | ರೂ.200/- | ರೂ.200/- |

**(ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. ಶೇ.40 ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿದ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಹೊಂದಿರಬೇಕು)**

- ಅಭ್ಯರ್ಥಿಯು ಎರಡು ಹುದ್ದೆಗೂ ಅರ್ಜಿ ಸಲ್ಲಿಸುವುದಾದಲ್ಲಿ ಆಯಾ ಹುದ್ದೆಗಳಿಗೆ ನಿಗದಿಪಡಿಸಿರುವ ಅರ್ಜಿ ಶುಲ್ಕವನ್ನು ಪ್ರತ್ಯೇಕವಾಗಿ ಪಾವತಿಸುವುದು. ಅರ್ಜಿ ಶುಲ್ಕವನ್ನು ಇ-ಅಂಚೆ (e-payment post offices only) ಮೂಲಕ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬಾಗಲಕೋಟ ಇವರ ಹೆಸರಿನಲ್ಲಿ ಪಾವತಿಸಬೇಕು. ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್ ಇವುಗಳನ್ನು ಸ್ವೀಕರಿಸುವುದಿಲ್ಲ.

3. **ಅರ್ಜಿ ಸಲ್ಲಿಸುವ ವಿಧಾನ ಃ-**

1. On-line ಮುಖಾಂತರ **http://bagalkot.nic.in** ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು download ಮಾಡಿಕೊಂಡು ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸತಕ್ಕದ್ದು.
2. On-line ದಲ್ಲಿ ಅರ್ಜಿಯು ದಿನಾಂಕ:25.10.2016 ರಂದು ಲಭ್ಯವಾಗುವುದು.

3. On-line ಹೊರತುಪಡಿಸಿ ಯಾವುದೇ ವಿಧದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. On-line ಅರ್ಜಿಯ ಪ್ರತಿಯನ್ನು ಅಂಚೆ ಮುಖಾಂತರವಾಗಲೀ, ಮುದ್ದಾಂ ಆಗಿ ಆಗಲೀ ಅಥವಾ ಇನ್ನಿತರ ವಿಧಾನಗಳಲ್ಲಿ ಇಲಾಖೆಗೆ ಸಲ್ಲಿಸಬೇಕಾದ ಅವಶ್ಯಕತೆ ಇರುವುದಿಲ್ಲ.
4. ಒಬ್ಬ ಅಭ್ಯರ್ಥಿಯು ಒಂದು ಅಥವಾ ಎರಡೂ ಹುದ್ದೆಗಳಿಗೆ ಪ್ರತ್ಯೇಕ ಅರ್ಜಿ ಸಲ್ಲಿಸಬಹುದು.
5. ಅರ್ಜಿಯ ಜೊತೆಗೆ ಯಾವುದೇ ಮೂಲ / ನಕಲು / ಜೆರಾಕ್ಸ್ ದಾಖಲಾತಿಗಳು, ಪ್ರಮಾಣ ಪತ್ರಗಳು, ಇತ್ಯಾದಿಗಳನ್ನು ಸಲ್ಲಿಸಬೇಕಾಗಿರುವುದಿಲ್ಲ.
6. ಅಭ್ಯರ್ಥಿಯು ಅರ್ಜಿಯನ್ನು ಸಲ್ಲಿಸುವ ಮೊದಲು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗೆ ಸಂಬಂಧಿಸಿದ ಪ್ರಾಧಿಕಾರಗಳಿಂದ ಅವಶ್ಯವಿರುವ ಎಲ್ಲಾ ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡು, ಸದರಿ ಮೂಲ ದಾಖಲೆ, ಪ್ರಮಾಣ ಪತ್ರಗಳಲ್ಲಿರುವ ಮಾಹಿತಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಸಮರ್ಪಕವಾಗಿ ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.
7. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಆನ್‌ಲೈನ್ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ಹಾಗೂ ಶುಲ್ಕ ಪಾವತಿಸಿದ ಬಗ್ಗೆ ರಶೀದಿಯನ್ನು ತೆಗೆದು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು. ಇದನ್ನು ಇಲಾಖೆಯು ಆಪೇಕ್ಷಿಸಿದಾಗ ಹಾಜರುಪಡಿಸತಕ್ಕದ್ದು.
8. ಅಭ್ಯರ್ಥಿಗಳು ಇಚ್ಛಿಸುವ ಜಿಲ್ಲೆಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.
9. ಯಾವುದೇ updates ಇದ್ದರೂ website ನಲ್ಲಿಯೇ ಹಾಕಲಾಗುವುದು. ಅಭ್ಯರ್ಥಿಗಳು ಅದನ್ನೇ ಅನುಸರಿಸಬೇಕು. ಪತ್ರ ದೂರವಾಣಿ ಅಥವಾ ಇನ್ನಾವುದೇ ಮೂಲದಿಂದ ಮಾಹಿತಿ ನೀಡಲಾಗುವುದಿಲ್ಲ.
10. ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅಧಿಸೂಚನೆ ಅನುಬಂಧದಲ್ಲಿರುವ ನಮೂನೆ ಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು.
11. ಅಡುಗೆ ಸಹಾಯಕರು ಮತ್ತು ಕಾವಲುಗಾರರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳಿಗೆ ಅಂಕರಹಿತ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲಾಗುವುದು.
12. ಅಡುಗೆ ಸಹಾಯಕರು ಮತ್ತು ಕಾವಲುಗಾರರ ಹುದ್ದೆಗಳಿಗೆ ನಡೆಸಲಾಗುವ ಅಂಕರಹಿತ ಪ್ರಾಯೋಗಿಕ ಪರೀಕ್ಷೆಯಲ್ಲಿ ಅರ್ಹರಾದವರನ್ನು ಮಾತ್ರ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಜೇಷ್ಠತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
13. ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿದ ದಿನಾಂಕ : **20.10.2016**
ಆನ್‌ಲೈನ್‌ನಲ್ಲಿ ಅರ್ಜಿ ಲಭ್ಯವಾಗುವ ದಿನಾಂಕ: **25.10.2016**
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **19.11.2016**
ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ : **21.11.2016** ಅಂಚೆ ಕಚೇರಿ ವೇಳೆಯಲ್ಲಿ.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಬಾಗಲಕೋಟ ರವರ ಕಾರ್ಯಾಲಯದ ದೂರವಾಣಿ ಸಂಖ್ಯೆ: **08354-235526** ಹಾಗೂ ವೆಬ್‌ಸೈಟ್ **http://bagalkot.nic.in** ಯನ್ನು ಸಂಪರ್ಕಿಸಬಹುದಾಗಿದೆ.

20/x/16

**(ಪಿ.ಎ.ಮೇಘಣ್ಣವರ)**
**ಜಿಲ್ಲಾಧಿಕಾರಿಗಳು ಬಾಗಲಕೋಟ**
**ಹಾಗೂ ಅಧ್ಯಕ್ಷರು, ಸಮಾಜ ಕಲ್ಯಾಣ ಇಲಾಖೆಯ**
**ಗ್ರೂಪ್ 'ಡಿ' ಜಿಲ್ಲಾ ಮಟ್ಟದ ಆಯ್ಕೆ ಸಮಿತಿ**